## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಕ್ಕೆ ಒದಗಿಸುತ್ತಿರುವ ವಾರ್ಷಿಕ ಅನುದಾನವನ್ನು ರೂ. 4.15 ಲಕ್ಷಗಳಿಂದ ರೂ.11.2ಗಳಿಗೆ ಹೆಚ್ಚಿಸಲು ಮತ್ತು ಈ ಯೋಜನೆಯನ್ನು ಇನ್ನೂ 10 ಜಿಲ್ಲೆಗಳಿಗೆ ವಿಸ್ತರಿಸುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಮಮಇ 246 ಎಸ್‌ಜೆಡಿ 2004, ದಿನಾಂಕ: 26-10-2004.
2) ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬೆಂಗಳೂರು ಇವರ ಪತ್ರ ಸಂಖ್ಯೆ:ವಿಹಿನಾಸಇ/ಇ-3/03/2014-15/116, ದಿನಾಂಕ: 08-4-2014.

ಪ್ರಸ್ತಾವನೆ:

ಹಿರಿಯ ನಾಗರಿಕರಿಗಾಗಿ ಆರೋಗ್ಯ ರಕ್ಷಣೆ ಹಾಗೂ ಇತರೆ ಅವಶ್ಯಕತೆಗಳನ್ನು ಒದಗಿಸುವುದಕ್ಕಾಗಿ ರಾಜ್ಯದ ಬೆಂಗಳೂರು, ಬೆಳಗಾವಿ, ಹುಬ್ಬಳ್ಳಿ-ಧಾರವಾಡ ಮತ್ತು ಗುಲ್ಬರ್ಗಾ ಜಿಲ್ಲೆಗಳಲ್ಲಿ ಒಟ್ಟು 4 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಪ್ರಾರಂಭಿಸಲು ಮೇಲೆ ಕ್ರಸಂ.(1)ರಲ್ಲಿ ಓದಲಾದ ದಿನಾಂಕ: 26.10.2004ರ ಸರ್ಕಾರದ ಆದೇಶದಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

2014-15ನೇ ಸಾಲಿನ ಆಯವ್ಯಯದಲ್ಲಿ ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಗಳಿಗೆ ಒದಗಿಸತ್ತಿರುವ ವಾರ್ಷಿಕ ಅನುದಾನವನ್ನು ರೂ.4.15 ಲಕ್ಷಗಳಿಂದ ರೂ.11.2 ಲಕ್ಷಗಳಿಗೆ ಹೆಚ್ಚಿಸಲು ಮತ್ತು ಈ ಯೋಜನೆಯನ್ನು ಇನ್ನೂ 10 ಜಿಲ್ಲೆಗಳಿಗೆ ವಿಸ್ತಿರಿಸಲು ಘೋಷಿಸಲಾಗಿದೆ.

ಈ ಯೋಜನೆಯನ್ನು ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಗಳು ಇಲ್ಲದೆ ಇರುವ ಮೈಸೂರು, ಹಾಸನ, ಚಿಕ್ಕಬಳ್ಳಾಪುರ, ಬೀದರ್, ಬಳ್ಳಾರಿ, ಮಂಗಳೂರು, ಧಾರವಾಡ, ತುಮಕೂರು, ಚಿತ್ರದುರ್ಗ ಮತ್ತು ಬಾಗಲುಕೋಟೆ ಜಿಲ್ಲೆಗಳಲ್ಲಿ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಾರ್ಷಿಕ ರೂ. 11.2ಲಕ್ಷಗಳ ಅನುದಾನದಲ್ಲಿ ಪ್ರಾರಂಭಿಸಲು ಮಂಜೂರಾತಿ ನೀಡುವಂತೆ ಮತ್ತು ಪ್ರಸ್ತುತ ಸಾಲಿನ ಅನುದಾನದಲ್ಲಿ ಒದಗಿಸಿರುವ ರೂ.360.73ಲಕ್ಷಗಳ ಜೊತೆಗೆ ರೂ.112.00ಲಕ್ಷಗಳನ್ನು ಹೆಚ್ಚುವರಿಯಾಗಿ ಒದಗಿಸುವಂತೆ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಮೇಲೆ ಕ್ರಸಂ (2)ರಲ್ಲಿ ಓದಲಾದ ದಿನಾಂಕ: 08-04-2014 ರ ಪತ್ರದಲ್ಲಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಮಮಇ 105 ಪಿಹೆಚ್‌ಪಿ 2014, ಬೆಂಗಳೂರು

## ದಿನಾಂಕ: 13-6-2014

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, 2014-15ನೇ ಸಾಲಿನ ಆಯವ್ಯಯದಲ್ಲಿ ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ರೂ.4.15 ಲಕ್ಷಗಳ ಅನುದಾನವನ್ನು ರೂ.11.2ಲಕ್ಷ (ಹನ್ನೊಂದು ಲಕ್ಷದ ಇಪ್ಪತ್ತು ಸಾವಿರ ಮಾತ್ರ)ಗಳಿಗೆ ಹೆಚ್ಚಿಸಲು ಮತ್ತು ಈ ಯೋಜನೆಯನ್ನು 2014-15ನೇ ಸಾಲಿನಲ್ಲಿ ಸೀಮಿತಗೊಳಿಸಿ, ಹೊಸ ಕೇಂದ್ರಗಳನ್ನು ಹಂತ ಹಂತವಾಗಿ ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2235-02-104-2-04 (ಯೋಜನೆ) ರಡಿಯಲ್ಲಿ ಒದಗಿಸಿರುವ ಅನುದಾನದಿಂದಲೇ ಭರಿಸತಕ್ಕದ್ದು.

..2

ಸಂಖ್ಯೆ
ದಿನಾಂಕ 16-6-2014
ಬೆಂಗಳೂರು

ಈ ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ, ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 350 ವೆಚ್ಚ-3 2014, ದಿನಾಂಕ: 2-6-2014 ಮತ್ತು ಪಿಡಿ 12 ಐಎಂಎಂ 2014, ದಿನಾಂಕ: 2-6-2014 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಕೆ.ಜರಳಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

ಇವರಿಗೆ:

1) ಮಹಾಲೇಖಪಾಲರು (ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
4) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
6) ನಿರ್ದೇಶಕರು, ಪಿಎಂಐ ವಿಭಾಗ, ಯೋಜನ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿರವರು,ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಸಕಾರದ ಉಪಕಾರ್ಯದರ್ಶಿರವರು, ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.